ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ:ಜಿಎಲ್13/137/2022-23 ದಿನಾಂಕ:04.11.2024

## ಸುತ್ತೋಲೆ

ವಿಷಯ: ದಿನಾಂಕ:07.11.2024ರಂದು ಮೈಸೂರು ವಿಶ್ವವಿದ್ಯಾನಿಲಯ ಆಯೋಜಿಸಿರುವ "ಕನ್ನಡ ರಾಜ್ಯೋತ್ಸವದ ಸಮಾರಂಭ"ಕ್ಕೆ ಹಾಜರಾಗುವ ಬಗ್ಗೆ.
ಉಲ್ಲೇಖ: ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:28.10.2024.

-:-

ದಿನಾಂಕ 07-11-2024 ರಂದು ಬೆಳಗ್ಗೆ 11.00 ಗಂಟೆಗೆ ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಸಭಾಂಗಣದಲ್ಲಿ "ಕನ್ನಡ ರಾಜ್ಯೋತ್ಸವ ಸಮಾರಂಭ"ವನ್ನು ಆಯೋಜಿಸಲಾಗಿದೆ. ಸದರಿ ಕಾರ್ಯಕ್ರಮದಲ್ಲಿ ಶ್ರೀ. ನಾಗತಿಹಳ್ಳಿ ಚಂದ್ರಶೇಖರ್, ಪ್ರಖ್ಯಾತ ಬರಹಗಾರರು, ಚಲನಚಿತ್ರ ನಿರ್ಮಾಪಕ ಹಾಗೂ ನಿರ್ದೇಶಕರು ಇವರು "ನಮ್ಮ ಕನ್ನಡವನ್ನು ವಿಶ್ವದರ್ಜೆಗೇರಿಸುವ ಸಾಧ್ಯತೆಗಳು" ಕುರಿತು ವಿಶೇಷ ಉಪನ್ಯಾಸ ನೀಡುವರು. ಸದರಿ ಸಮಾರಂಭದ ಅಧ್ಯಕ್ಷತೆಯನ್ನು ಪ್ರೊ. ಎನ್.ಕೆ. ಲೋಕನಾಥ್, ಸನ್ಮಾನ್ಯ ಕುಲಪತಿಗಳು ಇವರು ವಹಿಸಲಿದ್ದಾರೆ.

ಈ ಹಿನ್ನಲೆಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಬಟವಾಡೆ ಅಧಿಕಾರಿಗಳು/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಾಪಕರುಗಳು/ಅಧ್ಯಾಪಕೇತರ ಉದ್ಯೋಗಿಗಳು/ಸಂಶೋಧಕರು, ಅತಿಥಿ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ದಿನಾಂಕ:07.11.2024ರಂದು ಬೆಳಗ್ಗೆ 10.30 ಗಂಟೆಗೆ ಕ್ರಾಫರ್ಡ್ ಭವನದ ಸಭಾಂಗಣದಲ್ಲಿ ಕಡ್ಡಾಯವಾಗಿ ಭಾಗವಹಿಸಲು ತಿಳಿಸಲಾಗಿದೆ.

**ಖಾಯಂ ಉದ್ಯೋಗಿಗಳು ಸರ್ಕಾರ ನಿಗದಿಪಡಿಸಿರುವ ಕೆಂಪು-ಹಳದಿ ಬಣ್ಣ ಒಳಗೊಂಡಿರುವ ಕೊರಳುದಾರವನ್ನು ಆಡಳಿತ ಶಾಖೆಯ ಜಿ.ಎಲ್.06 ಕಾರ್ಯನಿರ್ವಾಹಕರಿಂದ ಪಡೆದು ಕೊರಳುದಾರ ಗುರುತಿನ ಚೀಟಿಯೊಂದಿಗೆ ಧರಿಸಿ ಕಾರ್ಯಕ್ರಮಕ್ಕೆ ಹಾಜರಾಗಲು ಸೂಚಿಸಲಾಗಿದೆ ಮತ್ತು ಸದರಿ ಕಾರ್ಯಕ್ರಮ ಮುಗಿದ ನಂತರ ತಮ್ಮ ವಿಭಾಗ/ಕಛೇರಿ/ತರಗತಿಗಳಿಗೆ ತೆರಳುವುದು.**

ಕುಲಸಚಿವ

ಗೆ,

1. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ ಸಂಯೋಜನಾಧಿಕಾರಿಗಳು ಮತ್ತು ಪ್ರಾಧ್ಯಾಪಕರು.
2. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು.
3. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
4. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
5. ಸಂಯೋಜಕರು, ಐ.ಸಿ.ಡಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು- ಇವರಿಗೆ ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.

} ಈ ವಿಷಯವನ್ನು ತಮ್ಮ ವಿಭಾಗದ ಎಲ್ಲಾ ಅಧ್ಯಾಪಕರು/ ಅತಿಥಿ ಉಪನ್ಯಾಸಕರು ವಿದ್ಯಾರ್ಥಿಗಳು/ಅಧ್ಯಾಪಕೇತರ ಉದ್ಯೋಗಿಗಳು/ಸಂಶೋಧಕರುಗಳ ಗಮನಕ್ಕೆ ತರಬೇಕೆಂದು ತಿಳಿಸಿದೆ. ಎಲ್ಲಾ ಉದ್ಯೋಗಿಗಳು ಕಡ್ಡಾಯವಾಗಿ ಭಾಗವಹಿಸುವಂತೆ ಸೂಕ್ತ ಕ್ರಮ ಕೈಗೊಂಡು ಕಾರ್ಯಕ್ರಮ ಯಶಸ್ವಿಯಾಗಲು ಸಹಕರಿಸುವುದು.

6. ಮಾನ್ಯ ಕುಲಪತಿಯವರ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈವಿವಿ, ಮೈಸೂರು.
7. ಕಛೇರಿ ಪ್ರತಿ.

Circulate among all staff & file
04/11

Scanned with OKEN Scanner